**ರಸ್ತೆಗಳ ಅಭಿವೃದ್ಧಿ ವಿಚಾರ**

807 - ಶ್ರೀ ಯು.ಕೆ. ಶಾಮಣ್ಣ (ಶೃಂಗೇರಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.?

*ಅ) ರಾಜ್ಯದಲ್ಲಿ ಲೋಕೋಪಯೋಗಿ ಇಲಾಖೆಯ ರಸ್ತೆಗಳ ಅಭಿವೃದ್ಧಿಗಾಗಿ ಶಾಸಕರ ಕ್ಷೇತ್ರಕ್ಕೆ ಹಣವನ್ನು ನಿಗದಿಪಡಿಸಿರುವುದು ನಿಜವೇ?*
*ಹಾಗಿದ್ದಲ್ಲಿ ಹಣವೆಷ್ಟು?*

*ಆ) ಶೃಂಗೇರಿ ಕ್ಷೇತ್ರದಲ್ಲಿ 3 ತಾಲ್ಲೂಕುಗಳಿದ್ದು ರಸ್ತೆ ವಿಸ್ತೀರ್ಣವು ಜಾಸ್ತಿಯಿರುವುದು ನಿಜವೆ?*

*ಇ) ಹಾಗಿದ್ದಲ್ಲಿ ಈ ರಸ್ತೆಗಳ ಅಭಿವೃದ್ಧಿಗಾಗಿ ಸರ್ಕಾರವು ತೆಗೆದುಕೊಂಡ ಕ್ರಮಗಳೇನು?*

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಸಚಿವರು) :

ಹೌದು. 1991-92ನೇ ಸಾಲಿನಲ್ಲಿ 12.00 ಲಕ್ಷ ರೂ.ಗಳನ್ನು ನಿಗದಿಪಡಿಸಿದೆ.

ಆ) ರಾಜ್ಯ ಹೆದ್ದಾರಿ 65 ಕಿ.ಮೀ. ಮತ್ತು ಜಿಲ್ಲಾ ಮುಖ್ಯ ರಸ್ತೆ 401.20 ಕಿ.ಮೀ. ಇರುತ್ತದೆ.

ಇ) ಈ ಕ್ಷೇತ್ರದಲ್ಲಿ ಅಭಿವೃದ್ಧಿಗೆ 1991-92ರಲ್ಲಿ ನಿಗದಿಪಡಿಸಿದ್ದ 12..00 ಲಕ್ಷ ರೂ.ಗಳ ಅನುದಾನ ಹಾಗೂ 1992-93ನೇ ಸಾಲಿನಲ್ಲಿ ನೀಡಿರುವ 15.00 ಲಕ್ಷ ರೂ.ಗಳ ಅನುದಾನದಲ್ಲಿ ರಸ್ತೆಗಳ ಅಭಿವೃದ್ಧಿಯನ್ನು ಮಾಡಲಾಗುತ್ತಿದೆ. ಅಲ್ಲದೆ ಲಭ್ಯ ಮಾಡಿರುವ ನಿರ್ವಹಣಾ ಅನುದಾನದಲ್ಲಿ ಈ ಕ್ಷೇತ್ರದ ರಸ್ತೆಗಳನ್ನು ಸಂಚಾರಕ್ಕೆ ಅಡಚಣೆ ಆಗದಂತೆ ನಿರ್ವಹಿಸಲಾಗುತ್ತಿದೆ.

**ಹುಕ್ಕೇರಿ ತಾಲ್ಲೂಕಿಗೆ ಮಿನಿ ವಿಧಾನಸೌಧದ ಮಂಜೂರಾತಿ.**

953 - ಶ್ರೀ ಬಿ. ಉಮೇಶ್ ವಿ. ಕತ್ತಿ (ಹುಕ್ಕೇರಿ) : ಮಾನ್ಯ ಲೋಕೋಪಯೋಗಿ ಇಲಾಖೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

*ಅ) ಬೆಳಗಾವಿ ಜಿಲ್ಲೆಯ ಹುಕ್ಕೇರಿ ತಾಲ್ಲೂಕಿಗೆ ಮಿನಿ ವಿಧಾನಸೌಧ ಮಂಜೂರಾಗಿದೆಯೆ, ಆಗಿದ್ದರೆ ಯಾವಾಗ?*

*ಆ) ಮಿನಿ ವಿಧಾನ ಸೌಧ ಕಟ್ಟಲು ಸ್ಥಳ ಒದಗಿಸಲಾಗಿದೆಯೇ, ಒದಗಿಸಿದ್ದಲ್ಲಿ ಹಾಗೂ ಇದಕ್ಕೆ ತಗಲುವ ವೆಚ್ಚವೆಷ್ಟು?*

ಶ್ರೀ ಕೆ.ಹೆಚ್. ರಂಗನಾಥ್ (ಲೋಕೋಪಯೋಗಿ ಇಲಾಖೆಯ ಸಚಿವರು) :

ಅ) ಆದೇಶ ಸಂಖ್ಯೆ ಆರ್‌ಡಿ 78 ಡಬ್ಲ್ಯೂಬಿಆರ್ 90 ದಿನಾಂಕ 28-9-92ರ ಆದೇಶದಲ್ಲಿ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ.

ಆ) ಹುಕ್ಕೇರಿ ನಗರದ ಸರ್ವೆ ನಂ: 114ರಲ್ಲಿನ ನಿವೇಶನವನ್ನು ಈಗಾಗಲೇ ವಶಪಡಿಸಿಕೊಳ್ಳಲಾಗಿದೆ. ಒಟ್ಟು 45ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಾಣ ಮಾಡಲು ನಿಯಮದ ರೀತ್ಯ ಕ್ರಮ ಕೈಗೊಂಡು ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.